## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಂ.ವಿ.ಬಂಡಿ, ಹಿಂದಿನ ಗ್ರಾಮ ಪಂಚಾಯತ್ ಕಾರ್ಯದರ್ಶಿ(ಪ್ರಸ್ತುತ ನಿವೃತ್ತ), ಚಿಂಚಲಿ ಗ್ರಾಮ ಪಂಚಾಯತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖೆ ವಿಚಾರಣೆ ನಡೆಸಲು ಅನುಮತಿ ನೀಡುವ ಬಗ್ಗೆ- ಆದೇಶ.

**ಓದಲಾಗಿದೆ:** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಗದಗ ಜಿಲ್ಲಾ ಪಂಚಾಯಿತಿ ಇವರ ಪತ್ರ ಸಂಖ್ಯೆ: 05.03.2015.

***

**ಪ್ರಸ್ತಾವನೆ:**

ಶ್ರೀ ಎಂ.ವಿ.ಬಂಡಿ, ಹಿಂದಿನ ಗ್ರಾಮ ಪಂಚಾಯತ್ ಕಾರ್ಯದರ್ಶಿ(ಪ್ರಸ್ತುತ ನಿವೃತ್ತ), ಚಿಂಚಲಿ ಗ್ರಾಮ ಪಂಚಾಯತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರು ಚಿಂಚಲಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದಾಗ, ಗ್ರಾಮ ಪಂಚಾಯತ್ ವಿವಿಧ ಯೋಜನೆಗಳ ದಾಖಲೆಗಳನ್ನು ನಿಯಮಾನುಸಾರ ನಿರ್ವಹಿಸದೇ ಇರುವುದು, ಜನಸಂಪರ್ಕ ಮತ್ತು ಗ್ರಾಮಸಭೆಗಳ ಠರಾವುಗಳನ್ನು ಬರೆಯದೆ ಇರುವುದು, ವರ್ಗ 1, ವರ್ಗ 2, ವಸತಿ ಯೋಜನೆಗಳು ಮತ್ತು 13ನೇ ಹಣಕಾಸು ಯೋಜನೆಯ ನಗದು ಪುಸ್ತಕಗಳನ್ನು ನಿಯಮಾನುಸಾರ ನಿರ್ವಹಿಸದೇ ಕರ್ತವ್ಯ ಲೋಪವೆಸಗಿರುತ್ತಾರೆ ಎಂಬ ಕಾರಣಕ್ಕೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಗದಗ, ಇವರು ತಮ್ಮ ಆದೇಶ ಸಂಖ್ಯೆ:ಗಜಿಪಂ:ಆಡಳಿತ:ಇವಿ:ಎಂ.ವಿ.ಬಂ:ವಹಿ:15:11-12/2014-15, ದಿನಾಂಕ:05.3.2011ರಂದು ಅಮಾನತ್ತು ಮಾಡಲಾಗಿತ್ತು.

ಕಾರ್ಯನಿರ್ವಾಹಕ ಅಧಿಕಾರಿ,ತಾಲ್ಲೂಕು ಪಂಚಾಯತ್, ಗದಗ ಇವರ ಪತ್ರ ಸಂಖ್ಯೆ:ತಾಪಂಗ:ಸಿಬ್ಬಂದಿ .ಸಿ.ಆರ್.2012.13/268, ದಿನಾಂಕ:2109.2012ರಲ್ಲಿ ಕಾರಣ ಕೇಳುವ ನೋಟೀಸಿನೊಂದಿಗೆ ಅನುಬಂಧ 1 ರಿಂದ 4ರ ದೋಷಾರೋಪಣಪಟ್ಟಿ ಸಿದ್ಧಪಡಿಸಿ ಸದರಿ ನೌಕರರಿಗೆ ಜಾರಿ ಮಾಡಲಾಗಿತ್ತು. ಜಿಲ್ಲಾ ಪಂಚಾಯಿತಿ ಕಾರ್ಯಾಲಯದ ಆದೇಶ ಸಂಖ್ಯೆ: ಗಜಿಪಂ:ಆಡಳಿತ:ಇ.ವಿ.ವಹಿ.15/11-12, ದಿನಾಂಕ:14.2.2012ರಂದು ಸಹಾಯಕ ಯೋಜನಾಧಿಕಾರಿಗಳು(ಎಸ್.ಜಿ.ಎಸ್.ವೈ), ಜಿಲ್ಲಾ ಪಂಚಾಯಿತಿ ಗದಗ, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ಆಪಾದಿತ ನೌಕರರು ದಿನಾಂಕ:29.02.2012ರಂದು ವಯೋನಿವೃತ್ತಿಗೊಂಡಿರುತ್ತಾರೆ. ನೌಕರರು ನಿವೃತ್ತಿ ಹೊಂದಿದ ನಂತರ ವಿಚಾರಣೆ ಪ್ರಾರಂಭಗೊಳಿಸಿದ ಕಾರಣ ಇಲಾಖೆ ವಿಚಾರಣೆಯನ್ನು ತಟಸ್ಥಗೊಳಿಸಲಾಗಿದೆ. ಆದುದರಿಂದ ಸದರಿ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮ 214(ಬಿ)(1)ರ ಪ್ರಕಾರ ಇಲಾಖಾ ವಿಚಾರಣೆ ನಡೆಸಲು ಅನುಮತಿ ನೀಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಗದಗ ಜಿಲ್ಲೆ ಇವರು ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಶ್ರೀ ಎಂ.ವಿ.ಬಂಡಿ, ಹಿಂದಿನ ಗ್ರಾಮ ಪಂಚಾಯತ್ ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), ಚಿಂಚಲಿ ಗ್ರಾಮ ಪಂಚಾಯತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರು ಚಿಂಚಲಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದಾಗ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಸದರಿ ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕೆ.ಸಿ.ಎಸ್.ಆರ್ ನಿಯಮ 214 2(ಎ) ಪ್ರಕಾರ ಅನುಮತಿ ನೀಡಲು ಸರ್ಕಾರವು ನಿರ್ಣಯಿಸಿರುತ್ತದೆ. ಆದುದರಿಂದ ಈ ಕೆಳಕಂಡ ಆದೇಶ-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 376 ಗ್ರಾಪಂಕಾ 2015, ಬೆಂಗಳೂರು, ದಿನಾಂಕ:19-07-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಎಂ.ವಿ.ಬಂಡಿ, ಹಿಂದಿನ ಗ್ರಾಮ ಪಂಚಾಯತ್ ಕಾರ್ಯದರ್ಶಿ(ಪ್ರಸ್ತುತ ನಿವೃತ್ತ), ಚಿಂಚಲಿ ಗ್ರಾಮ ಪಂಚಾಯತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರು ಚಿಂಚಲಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದಾಗ

ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಸದರಿ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮ 214(2)(ಎ)ರಡಿಯಲ್ಲಿ, ಇಲಾಖಾ ವಿಚಾರಣೆ ನಡೆಸಲು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

19/7/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ಮಹಾಲೇಖಪಾಲರು(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಗದಗ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ.
4) ಶ್ರೀ ಎಂ.ವಿ.ಬಂಡಿ, ಹಿಂದಿನ ಗ್ರಾಮ ಪಂಚಾಯತ್ ಕಾರ್ಯದರ್ಶಿ(ಪ್ರಸ್ತುತ ನಿವೃತ್ತ), ಚಿಂಚಲಿ ಗ್ರಾಮ ಪಂಚಾಯತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ.
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.